# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 382 |
| ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.08.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ e-Gramatana ಹಾಗೂ Panchatantra 2.0 ವ್ಯವಸ್ಥೆಗಳು ಸಂಪೂರ್ಣವಾಗಿ ಜಾರಿಯಲ್ಲಿದೆಯೇ; ಈ ಮೂಲಕ ಡಿಜಿಟಲ್ ದಾಖಲೆಗಳ ವಿತರಣೆಯಲ್ಲಿ ಉಂಟಾಗುತ್ತಿರುವ ತಾಂತ್ರಿಕ ಅಡಚಣೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಪಂಚತಂತ್ರ 2.0 ಮತ್ತು ಇ-ಸ್ವತ್ತು ತಂತ್ರಾಂಶಗಳನ್ನು ಬೀದರ್ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನ ಮಾಡಿ, ಪಂಚತಂತ್ರ 2.0 ಜಾರಿಗೊಳಿಸಲಾಗಿದೆ. ಪಂಚತಂತ್ರ 2.0 ತಂತ್ರಾಂಶದ ಮೂಲಕ ವಿತರಿಸಲಾಗುತ್ತಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 20 ಸೇವೆಗಳಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಯು ಇರುವುದಿಲ್ಲ. ಇ-ಸ್ವತ್ತು ತಂತ್ರಾಂಶದ ನಮೂನೆ 11ಎ ಮತ್ತು 11ಬಿಗಳ ವರ್ಗೀಕರಣ ಪ್ರಕ್ರಿಯೆಯಲ್ಲಿನ ವಿವಿಧ ಮಾಡ್ಯುಲ್‌ಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ಇವುಗಳಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲಾಗಿದ್ದು ಪ್ರಸ್ತುತ ತಂತ್ರಾಂಶವು ಸ್ಥಿರವಾಗಿ ಕಾರ್ಯನಿರ್ವಹಿಸುತ್ತಿದೆ.<br><br>ಕೆಲವೊಂದು ಅರ್ಜಿಗಳ ವಿಲೇವಾರಿಯಲ್ಲಿ ತಾಂತ್ರಿಕ ತೊಡಕುಗಳು ಕಂಡುಬರುತ್ತಿದ್ದು, ಅವುಗಳನ್ನು ಅರ್ಜಿವಾರು ಬಗೆಹರಿಸಲಾಗುತ್ತಿದೆ.<br><br>ಆಡಳಿತಾತ್ಮಕ ಮತ್ತು ತಾಂತ್ರಿಕ ಕ್ರಮಗಳನ್ನು ಶಿಫಾರಸ್ಸು ಮಾಡಲು ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. |
| (ಆ) | ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಯುವ ಪ್ರತಿಯೊಂದು ಅಭಿವೃದ್ಧಿ ಕಾಮಗಾರಿಗಳ ವಿವರಗಳನ್ನು (ವೆಚ್ಚ, ಗುತ್ತಿಗೆದಾರರ ಹೆಸರು, ಅನುದಾನ ಮೂಲ) ಸಾರ್ವಜನಿಕರಿಗೆ ತಿಳಿಯುವಂತೆ "ಸಿಟಿಜನ್ ಇನ್ಫಾರ್ಮೇಶನ್ ಬೋರ್ಡ್" (Citizen Information Boards) ಮೂಲಕ ಪ್ರಕಟಿಸುವುದು ಕಡ್ಡಾಯವಾಗಿದೆಯೇ; ಈ ನಿಯಮವನ್ನು ಪಾಲಿಸದ ಪಂಚಾಯಿತಿಗಳ ವಿರುದ್ಧ ಕೈಗೊಳ್ಳಲಾಗುವ ಕ್ರಮಗಳೇನು: | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ವಿವರಗಳನ್ನು (ವೆಚ್ಚ, ಗುತ್ತಿಗೆದಾರರ ಹೆಸರು,ಅನುದಾನ ಮೂಲ) ಸಾರ್ವಜನಿಕರಿಗೆ ತಿಳಿಯುವಂತೆ 'Citizen Information board' ಮೂಲಕ ಪ್ರಕಟಿಸುವುದು ಕಡ್ಡಾಯವಾಗಿರುತ್ತದೆ. ಪ್ರತಿಯೊಂದು ಯೋಜನೆಯಡಿ ಅನುಷ್ಠಾನ ಮಾಡಬೇಕಾದ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸಿದ್ಧಪಡಿಸಲಾದ ಅಂದಾಜು ಪತ್ರಿಕೆಗಳಲ್ಲಿ CIR('Citizen Information board')ನ್ನು ಅಳವಡಿಸಲು ಅನುದಾನ ಮಿಸಲಿಡಲಾಗಿದೆ. ಅದರಂತೆ ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| (ಇ) | ಕಳೆದ ಒಂದು ವರ್ಷದಲ್ಲಿ ಜಿಲ್ಲೆಯಲ್ಲಿನ ಪ್ರತಿಯೊಂದು ಗ್ರಾಮ ಪಂಚಾಯತಿಯಲ್ಲಿ ನಿಯಮಾನುಸಾರ ನಡೆಸಬೇಕಾದ ಗ್ರಾಮ ಸಭೆಗಳು ನಿಗಧಿತ ಅವಧಿಯಲ್ಲಿ ನಡೆದಿವೆಯೇ; ಈ ಸಭೆಗಳಲ್ಲಿ ಸಾರ್ವಜನಿಕರ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು: | ಬೀದರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಸಭೆಗಳನ್ನು ನಿಗದಿತ ಅವಧಿಯಲ್ಲಿ ನಡೆಸಲಾಗಿದೆ ಮತ್ತು ಸಾರ್ವಜನಿಕರು ಭಾಗವಹಿಸುವಿಕೆಯ ಕುರಿತು GPS ಆಧಾರಿತ ಫೋಟೋಗಳನ್ನು ಪಂಚತಂತ್ರ 2.0 ನಲ್ಲಿ ಅಳವಡಿಸಲಾಗುತ್ತದೆ ಹಾಗೂ ಫೇಸ್‌ಬುಕ್ ಮತ್ತು ಯುಟ್ಯೂಬ್ ಇತ್ಯಾದಿಗಳ ಸಾಮಾಜಿಕ ಮಾಧ್ಯಮಗಳಲ್ಲಿ ಗ್ರಾಮ ಸಭೆಗಳನ್ನು ನೇರ ಪ್ರಸಾರ ಮಾಡಲಾಗುತ್ತದೆ. |
| (ಈ) | ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಪ್ರಸ್ತುತ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ (PDO) ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ಬೀದರ ಜಿಲ್ಲೆಯಲ್ಲಿ<br><br>1. ಪಂಚಾಯತ ಅಭಿವೃದ್ಧಿ ಅಧಿಕಾರಿ- 45 ಹುದ್ದೆಗಳು.<br><br>2. ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) - 14 ಹುದ್ದೆಗಳು.<br><br>3. ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-2) - 12 ಹುದ್ದೆಗಳು.<br><br>**4. ದ್ವಿತೀಯ ದರ್ಜೆ ಲೆಕ್ಕ ಸಹಾಯಕರು - 10 ಹುದ್ದೆಗಳು ಖಾಲಿ ಇರುತ್ತವೆ.**<br><br>ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 384 ಗ್ರಾಪಂಕಾ 2018 (ಭಾಗ-1), ದಿನಾಂಕ: 23.11.2018 ರಲ್ಲಿ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯ ಹುದ್ದೆ ನಿವೃತ್ತಿ, ಅಮಾನತ್ತು ಹಾಗೂ ಇನ್ನಿತರ ಕಾರಣಗಳಿಂದ ತೆರವಾಗಿದ್ದಲ್ಲಿ, ಅದೇ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ (ಗ್ರೇಡ್-1) ರವರಿಗೆ ಪ್ರಭಾರ ವಹಿಸಲು ಹಾಗೂ ಒಂದು ವೇಳೆ ಆ ಗ್ರಾಮ ಪಂಚಾಯಿತಿಯಲ್ಲಿ ಪೂರ್ಣ ಕಾಲಿಕ ಗ್ರೇಡ್-1 ಕಾರ್ಯದರ್ಶಿ ಇಲ್ಲದಿದ್ದಲ್ಲಿ, ನೆರೆಯ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1) ವೃಂದದ 49 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-2) ವೃಂದದ 38 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 25 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. |

| | | |
|---|---|---|
| (ಊ) | ಪಂಚಾಯತಿ ಕಾಮಗಾರಿಗಳಲ್ಲಿ ಪಾರದರ್ಶಕತೆ ತರಲು ನಿಯಮಾನುಸಾರ ನಡೆಸಬೇಕಾದ ಸಾಮಾಜಿಕ ಪರಿಶೀಲನೆ (Social Audit) ಪ್ರಕ್ರಿಯೆ ಜಿಲ್ಲೆಯಲ್ಲಿ ನಿಯಮಿತವಾಗಿ ನಡೆಯುತ್ತಿದೆಯೇ; ಕಳೆದ ಎರಡು ವರ್ಷಗಳಲ್ಲಿ ಸಾಮಾಜಿಕ ಪರಿಶೀಲನೆಯ ವೇಳೆ ಪತ್ತೆಯಾದ ಆರ್ಥಿಕ ಅಕ್ರಮಗಳ ಒಟ್ಟು ಮೊತ್ತ ಎಷ್ಟು; ಎಷ್ಟು ಅಧಿಕಾರಿಗಳು/ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆ? | ಬೀದರ ಜಿಲ್ಲೆಯಲ್ಲಿ ಪಂಚಾಯತ ಕಾಮಗಾರಿಗಳಲ್ಲಿ ಪಾರದರ್ಶಕತೆ ತರಲು ನಿಯಮಾನುಸಾರ ನಡೆಸಬೇಕಾದ ಸಾಮಾಜಿಕ ಪರಿಶೀಲನೆ (Social Audit) ಪ್ರಕ್ರಿಯೆ ಬೀದರ ಜಿಲ್ಲೆಯಲ್ಲಿ ನಿಯಮಿತವಾಗಿ ನಡೆಯುತ್ತಿದೆ.<br><br>ಕಳೆದ ಎರಡು ವರ್ಷಗಳಲ್ಲಿ ಸಾಮಾಜಿಕ ಪರಿಶೀಲನೆಯ ವೇಳೆ ಒಟ್ಟು 2529 ಪ್ರಕರಣಗಳಿಗೆ ಅನುಗುಣವಾಗಿ ರೂ.593.35 ಲಕ್ಷಗಳ ವಸೂಲಾತಿ/ ಆಕ್ಷೇಪಣೆ ಮೊತ್ತ ಇರುತ್ತದೆ.<br><br>ಸದರಿ ಸಾಮಾಜಿಕ ಪರಿಶೋಧನೆಯಲ್ಲಿ ತಿಳಿಸಲಾದ ವಸೂಲಾತಿಯನ್ನು ಮಾರ್ಗಸೂಚಿಗಳಂತೆ ಜಿಲ್ಲೆಯ ಆಯಾ ತಾಲ್ಲೂಕಗಳಲ್ಲಿ ಪ್ರತಿ ತಿಂಗಳು ಎರಡು ಬಾರಿ ಅಡಹಾಕ ಸಮಿತಿಗಳನ್ನು ಜರುಗಿಸಿ ಆಕ್ಷೇಪಣೆ ಮತ್ತು ವಸೂಲಾತಿಗಾಗಿ ಸೂಚಿಸಿರುವ ಮೊತ್ತವನ್ನು ಸಲ್ಲಿಸಲಾದ ದಾಖಲೆಗಳ ಮೇರಗೆ ಕೈಬೀಡಲು ಅಥವಾ ವಸೂಲಾತಿ ಮಾಡಲು ಸಮಿತಿಯು ತೀರ್ಮಾನಿಸಿದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸದರಿ ಬೀದರ ಜಿಲ್ಲೆಯಲ್ಲಿ 51 ಪ್ರಕರಣಗಳಲ್ಲಿ ರೂ. 1.03 ಲಕ್ಷಗಳು ವಸೂಲಾತಿ ಮಾಡಲಾಗಿರುತ್ತದೆ ಮತ್ತು 40 ಪ್ರಕರಣಗಳಲ್ಲಿ ರೂ. 1.24 ಲಕ್ಷಗಳು ಕೈಬಿಡಲಾಗಿರುತ್ತದೆ. ಮುಂದುವರೆದು ತಾಲ್ಲೂಕಗಳಲ್ಲಿ ಅಡಹಾಕ ಸಮಿತಿಗಳನ್ನು ಜರುಗಿಸಿ ಕಂಡಿಕೆಗಳನ್ನು ಇತ್ಯರ್ಥಗೊಳಿಸುವ ಕುರಿತು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 794 ಗ್ರಾಪಂಅ 2026

(ಈಶ್ವರ ಬಿ. ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.